ಪ್ರೌಢಶಾಲೆ ಕಟ್ಟಡ ಪೂರ್ಣಗೊಳಿಸುವುದು

444 (357) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ):–ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗುಂಡ್ಲುಪೇಟೆ ತಾಲ್ಲೂಕು ಭೀಮನಬೀಡು ಗ್ರಾಮದಲ್ಲಿ ಸರ್ಕಾರ ಪ್ರೌಢಶಾಲೆ ಕಟ್ಟಡ ನಿರ್ಮಾಣಕ್ಕೆ 5 ವರ್ಷಗಳ ಹಿಂದೆಯೇ ರೂ. 9.20 ಲಕ್ಷ ಅನುದಾನ ಒದಗಿಸಿ, ಕಟ್ಟಡ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ನೀಡಿ, ಕಾಮಗಾರಿ ಆರಂಭಿಸಿ ಅರ್ಧದಷ್ಟು ಕೆಲಸವಾಗಿದ್ದರೂ ಕೂಡ ಬಿಡುಗಡೆಯಾದ ಹಣ ನೀಡದೇ 5 ವರ್ಷಗಳಿಂದ ಈ ಶಾಲಾ ಕಟ್ಟಡ ಕಾಮಗಾರಿ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಶಾಲಾ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಅವಶ್ಯವಿರುವ ರೂ. 9.20 ಲಕ್ಷ ಅನುದಾನವನ್ನು ಈ ವರ್ಷದಲ್ಲಿಯೇ ಬಿಡುಗಡೆ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಈ ಶಾಲಾ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಅವಶ್ಯವಿರುವ ಅನುದಾನವನ್ನು 2010–11ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಒದಗಿಸಲಾಗುವುದು.

ಪಶುಸಂಗೋಪನೆಗೆ ಅನುದಾನ

445 (726) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ):– ಮಾನ್ಯ ಪಶುಸಂಗೋಪನಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಪಶುಸಂಗೋಪನಾ ಇಲಾಖೆಗೆ 2008–09 ಮತ್ತು 2009–10ನೇ ಸಾಲಿನ ಆಯವ್ಯಯದಲ್ಲಿ ಎಷ್ಟು ಹಣವನ್ನು ಮಂಜೂರು ಮಾಡಲು ಅಂದಾಜಿಸಲಾಗಿತ್ತು: ಈ ಪೈಕಿ ಬಿಡುಗಡೆ ಮಾಡಲಾಗಿರುವ ಹಾಗೂ ಖರ್ಚು ಮಾಡಲಾಗಿರುವ ಹಣ ಎಷ್ಟು?

ಆ) ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. ಖರ್ಚು ಮಾಡಲಾಗಿರುವ ಹಣ ಎಷ್ಟು?

ಇ) ಪಶುಸಂಗೋಪನಾ ಇಲಾಖೆಯು ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ; ಈ ಯೋಜನೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನ ಬಂದಿದೆ?